ಶಿಕ್ಷಣದ ಹಕ್ಕು

ಸರ್ವ ಶಿಕ್ಷಣ ಅಭಿಯಾನ

ಎಲ್ಲರೂ ಕಲಿಯೋಣ–ಎಲ್ಲರೂ ಬೆಳೆಯೋಣ

**ಸರ್ವ ಶಿಕ್ಷಣ ಅಭಿಯಾನ – ಕರ್ನಾಟಕ**

**ರಾಜ್ಯ ಯೋಜನಾ ನಿರ್ದೇಶಕರ ಕಚೇರಿ, ನೃಪತುಂಗ ರಸ್ತೆ, ಬೆಂಗಳೂರು 01**

---

ಸಂಖ್ಯೆ : ಸಶಿಅ/ಯೋ/ಒಲಿಂಪಿಯಾಡ್/2013–14 ದಿನಾಂಕ : 3.8.2012

## ಸುತ್ತೋಲೆ

ವಿಷಯ : ಒಲಿಂಪಿಯಾಡ್ ಸ್ಪರ್ಧೆಯಲ್ಲಿ ವಿಶೇಷ ವಸತಿ ಶಾಲೆಗಳ ಮಕ್ಕಳು ಭಾಗವಹಿಸಲು ಅನುವು ಮಾಡಿಕೊಡುವ ಬಗ್ಗೆ.

ಉಲ್ಲೇಖ : ಪ್ರಾಂಶುಪಾಲರು, ಡಯಟ್, ಬಿಜಾಪುರ ಇವರ ಪತ್ರ ಸಂಖ್ಯೆ : ಸಿ.೫೦/ಶಿ.ಟ.ಸ್ರಾ/ 2013-14 ದಿನಾಂಕ 21-7-13

******

ವಿಶೇಷ ವಸತಿ ಶಾಲೆಗಳಲ್ಲಿ ಮಕ್ಕಳನ್ನು ದಾಖಲು ಮಾಡಿಕೊಳ್ಳುವ ಮೊದಲ ಪ್ರವೇಶ ಪರೀಕ್ಷೆಯನ್ನು ನಡೆಸಿ, ಹೆಚ್ಚು ಅಂಕಗಳಿಸಿದ ಮಕ್ಕಳನ್ನು ಶಾಲೆಗೆ ಹಾಜರು ಮಾಡಕೊಳ್ಳುವ ನಿಯಮವಿರುತ್ತದೆ. ಈ ನಿಯಮದ ಪ್ರಕಾರ ವಿಶೇಷ ವಸತಿ ಶಾಲೆಗಳ ಮಕ್ಕಳು ಆಯ್ಕೆ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುತ್ತಾರೆ ಹಾಗೂ ಸಾಮಾನ್ಯ ಮಕ್ಕಳಿಗಿಂತ ಸ್ವಲ್ಪ ಹೆಚ್ಚಿನ ಬುದ್ಧಿಮತ್ತೆಯನ್ನು ಹೊಂದಿರುವ ಮಕ್ಕಳಾಗಿರುತ್ತಾರೆ. ಸರ್ಕಾರಿ ಶಾಲೆಗಳಲ್ಲಿ ಸಾಮಾನ್ಯ ಮಕ್ಕಳು ಅಭ್ಯಾಸ ಮಾಡುತ್ತಿದ್ದು, ವಸತಿ ಶಾಲೆಗಳ ಮಕ್ಕಳೊಡನೆ ಸ್ಪರ್ಧೆ ನಡೆಸಿದಲ್ಲಿ, ಸಾಮಾನ್ಯ ಮಕ್ಕಳಿಗೆ ಕಠಿಣ ಎನಿಸಬಹುದು. ಈ ಹಿನ್ನೆಲೆಯಲ್ಲಿ ವಿಶೇಷ ವಸತಿ ಶಾಲೆಯ ಮಕ್ಕಳನ್ನು ಒಲಿಂಪಿಯಾಡ್ ಸ್ಪರ್ಧೆಗೆ ಭಾಗವಹಿಸುವಂತಿಲ್ಲ ಎಂದು ಈ ಕಚೇರಿಯ ಸಮಸಂಖ್ಯೆಯ ಸುತ್ತೋಲೆಯಲ್ಲಿ ಈಗಾಗಲೇ ತಿಳಿಸಲಾಗಿದೆ. ಅದರಂತೆ ಒಲಿಂಪಿಯಾಡ್ ಸ್ಪರ್ಧೆಯನ್ನು ಕೇವಲ ಸರ್ಕಾರಿ ಶಾಲೆಯ ಮಕ್ಕಳಿಗೆ ನಡೆಸಲು ನಿರ್ಧರಿಸಲಾಗಿದ್ದು, ವಿಶೇಷ ವಸತಿ ಶಾಲೆಯ ಮಕ್ಕಳು ಭಾಗವಹಿಸುವುದು ಸಾಧ್ಯವಿಲ್ಲವೆಂಬುದನ್ನು ಸ್ಪಷ್ಟಪಡಿಸಲಾಗಿದೆ.

ಸಹ ನಿರ್ದೇಶಕರು (ಕಾರ್ಯಕ್ರಮ)

ಸರ್ವ ಶಿಕ್ಷಣ ಅಭಿಯಾನ

ಪ್ರತಿಯನ್ನು,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸರ್ವ ಶಿಕ್ಷಣ ಅಭಿಯಾನ
2. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ)
3. ರಾಜ್ಯದ ಎಲ್ಲಾ ಜಿಲ್ಲೆಗಳ ಉಪಯೋಜನಾ ಸಮನ್ವಯಾಧಿಕಾರಿಗಳು, ಸರ್ವ